# ಕುವೆಂಪು ವಿಶ್ವವಿದ್ಯಾಲಯ

## ವಿದ್ಯಾವಿಷಯಕ ಪರಿಷತ್ ಅಸಾಮಾನ್ಯ (ಘಟಿಕೋತ್ಸವ) ಸಭೆಯ ನಡಾವಳಿಗಳು

## ಸಭಾ ದಿನಾಂಕ : 15-06-2022

ಜ್ಞಾನಸಹ್ಯಾದ್ರಿ, ಶಂಕರಘಟ್ಟ – 577 451

ಶಿವಮೊಗ್ಗ ಜಿಲ್ಲೆ

ಫ್ಯಾಕ್ಸ್: 08282-256262
ಇ-ಮೇಲ್: drsyndicateku@gmail.com

08282-256148 (ಪ್ರಾಧಿಕಾರಗಳ ವಿಭಾಗ)
ವೆಬ್‌ಸೈಟ್: www.kuvempu.ac.in

# ಕುವೆಂಪು ವಿಶ್ವವಿದ್ಯಾಲಯ

ವಿಶ್ವವಿದ್ಯಾಲಯ ಕಾರ್ಯಾಲಯ, ಜ್ಞಾನ ಸಹ್ಯಾದ್ರಿ- 577 451

ಸಂಖ್ಯೆ: ಕುವಿ:ಯುವಿಟಿ-1:ಎ.ಸಿ.02-22:130:2022-23 ದಿನಾಂಕ:23-06-2022

ಮಾನ್ಯರೆ,

ವಿಷಯ: ದಿನಾಂಕ:15-06-2022ರಂದು ನಡೆದ ವಿದ್ಯಾವಿಷಯಕ ಪರಿಷತ್ತಿನ ಅಸಾಮಾನ್ಯ ಸಭೆಯ ನಡಾವಳಿಗಳು.

* * *

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಕಾಯ್ದೆ - 2000ರ ಪ್ರಕರಣ - 31(xviii) ರ ಪ್ರಕಾರ ರಚಿಸಲಾಗಿರುವ/ ಅನುಸರಿಸಲಾಗುತ್ತಿರುವ ವಿಶ್ವವಿದ್ಯಾಲಯ ಪ್ರಾಧಿಕಾರಗಳ ನಿರ್ವಹಣೆ ಮತ್ತು ವ್ಯವಹಾರಗಳ ಅಧಿನಿಯಮಗಳು- ಅಧ್ಯಾಯ-IIರ ಪ್ರಕರಣ- 17ರನ್ವಯ ದಿನಾಂಕ:15-06-2022ರಂದು ವಿಶ್ವವಿದ್ಯಾಲಯದ **"ಶತಮಾನೋತ್ಸವ ಭವನದ ಮೂರನೇ ಮಹಡಿಯ ಸಿಂಡಿಕೇಟ್ ಸಭಾಂಗಣ"**ದಲ್ಲಿ ನಡೆದ ವಿದ್ಯಾವಿಷಯಕ ಪರಿಷತ್ತಿನ ಅಸಾಮಾನ್ಯ ಸಭೆಯ ನಡಾವಳಿಗಳನ್ನು ಈ ಮೂಲಕ ಕಳುಹಿಸಲು ನಿರ್ದೇಶಿತನಾಗಿದ್ದೇನೆ.

ವಿಶ್ವವಿದ್ಯಾಲಯ ಪ್ರಾಧಿಕಾರಗಳ ನಿರ್ವಹಣೆ ಮತ್ತು ವ್ಯವಹಾರಗಳ ಅಧಿನಿಯಮಗಳು- ಅಧ್ಯಾಯ-IIರ ಪ್ರಕರಣ- 17ರ ಕಂಡಿಕೆ (2) ರ ಪ್ರಕಾರ ಸದರಿ ನಡಾವಳಿಗಳನ್ನು ಕಳುಹಿಸಿದ 21 ದಿನಗಳೊಳಗೆ ತಮ್ಮಿಂದ ನಡಾವಳಿಗಳ ದಾಖಲಾತಿಯ ಬಗ್ಗೆ ಯಾವುದೇ ಆಕ್ಷೇಪಣೆ ಬಾರದಿದ್ದಲ್ಲಿ ನಡಾವಳಿಗಳ ದಾಖಲಾತಿಯು ಸರಿಯಾಗಿದೆಯೆಂದು ಭಾವಿಸಲಾಗುವುದು.

ತಮ್ಮ ವಿಶ್ವಾಸಿ,

ಕುಲಸಚಿವರು.

ಗೆ,

ವಿದ್ಯಾವಿಷಯಕ ಪರಿಷತ್ತಿನ ಎಲ್ಲಾ ಸದಸ್ಯರುಗಳಿಗೆ.

ಪ್ರತಿಗಳು:-

1) ಮಾನ್ಯ ರಾಜ್ಯಪಾಲರ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯಪಾಲರ ಸಚಿವಾಲಯ, ರಾಜಭವನ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಕರ್ನಾಟಕ ಸರ್ಕಾರದ ಸಚಿವಾಲಯಗಳು ಬಹುಮಹಡಿಗಳ ಕಟ್ಟಡ, ಡಾ.ಬಿ.ಆರ್.ಅಂಬೇಡ್ಕರ್ ವೀಧಿ, ಬೆಂಗಳೂರು.
3) ಆಯುಕ್ತರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ಕರ್ನಾಟಕ ಸರ್ಕಾರ, ನೃಪತುಂಗ ರಸ್ತೆ, ಬೆಂಗಳೂರು.
4) ಕುಲಸಚಿವರು(ಪರೀಕ್ಷಾಂಗ) ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
5) ಹಣಕಾಸು ಅಧಿಕಾರಿಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
6) ನಿಕಾಯಗಳ ಡೀನರುಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
7) ಗ್ರಂಥಪಾಲಕರು, ವಿಶ್ವವಿದ್ಯಾಲಯ ಗ್ರಂಥಾಲಯ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
8) ನಿರ್ದೇಶಕರು,ಐ.ಕ್ಯೂ.ಎ.ಸಿ./ಪಿ.ಎಂ.ಇ/ ಸಿ.ಡಿ.ಸಿ/ ಶಾರೀರಿಕ ಶಿಕ್ಷಣ/ ವಿದ್ಯಾರ್ಥಿ ಕ್ಷೇಮಪಾಲನ/ ಪ್ರಸಾರಾಂಗ/ ದೂರಶಿಕ್ಷಣ ನಿರ್ದೇಶನಾಲಯ ವಿಭಾಗ, ಮಹಿಳಾ ಅಧ್ಯಯನ ಕೇಂದ್ರ, ಯು.ಸಿ.ಸಿ.ಎಫ್, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
9) ಎಲ್ಲಾ ಅಧ್ಯಕ್ಷರು / ಸಂಚಾಲಕರು, ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ/ಶಿವಮೊಗ್ಗ/ ಕಡೂರು./ ಚಿಕ್ಕಮಗಳೂರು
10) ಎಲ್ಲಾ ಉಪಕುಲಸಚಿವರು./ಸಹಾಯಕ ಕುಲಸಚಿವರುಗಳು/ ಅಧೀಕ್ಷಕರುಗಳು, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ/ಶಿವಮೊಗ್ಗ/ಕಡೂರು.
11) ಪ್ರಾಂಶುಪಾಲರು, ಸಹ್ಯಾದ್ರಿ ಕಲಾ ಮತ್ತು ವಾಣಿಜ್ಯ ಕಾಲೇಜು / ಸಹ್ಯಾದ್ರಿ ವಿಜ್ಞಾನ ಕಾಲೇಜು/ ಸಹ್ಯಾದ್ರಿ ವಾಣಿಜ್ಯ ಮತ್ತು ನಿರ್ವಹಣೆ ಕಾಲೇಜು, ಶಿವಮೊಗ್ಗ ಶಿವಮೊಗ್ಗ.
12) ನಿರ್ದೇಶಕರು, ಕುವೆಂಪು ವಿಶ್ವವಿದ್ಯಾಲಯ, ಸ್ನಾತಕೋತ್ತರ ಕೇಂದ್ರ, ಬಿ.ಹೆಚ್ ರಸ್ತೆ ಕಡೂರು.
13) ಸಂಯೋಜನಾಧಿಕಾರಿಗಳು, ಸ್ನಾತಕೋತ್ತರ ಕೇಂದ್ರ, ಐ.ಡಿ.ಎಸ್.ಜಿ ಕಾಲೇಜು ಕಟ್ಟಡ, ಚಿಕ್ಕಮಗಳೂರು. ಕುವೆಂಪು ವಿಶ್ವವಿದ್ಯಾಲಯ
14) ಸಂಚಾಲಕರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಘಟಕ/ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ಘಟಕ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
15) ಅಪರ ನಿರ್ದೇಶಕರು, ಕರ್ನಾಟಕ ರಾಜ್ಯ ಲೆಕ್ಕಪರಿಶೋಧನೆ ಮತ್ತು ಲೆಕ್ಕಪತ್ರ ಇಲಾಖೆ, ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
16) ಕಾರ್ಯಪಾಲಕ ಅಭಿಯಂತರರು, ವಿಶ್ವವಿದ್ಯಾಲಯ ಇಂಜಿನಿಯರಿಂಗ್ ವಿಭಾಗ, ವಿಶ್ವವಿದ್ಯಾಲಯ, ಶಂಕರಘಟ್ಟ
17) ವಿದ್ಯಾರ್ಥಿಗಳ ಉತ್ತೇಜನ ಸೇವಾ ಕೇಂದ್ರ, ವಿದ್ಯಾರ್ಥಿಗಳ ಸೌಲಭ್ಯ ಸಮುಚ್ಛಯ, ಕುವೆಂಪು ವಿಶ್ವವಿದ್ಯಾಲಯ, ಜ್ಞಾನಸಹ್ಯಾದ್ರಿ, ಶಂಕರಘಟ್ಟ
18) ಆಪ್ತಕಾರ್ಯಾಲಯ ಕುಲಪತಿಗಳು: ಕುಲಸಚಿವರು: ಕುಲಸಚಿವರು(ಮೌಲ್ಯಮಾಪನ):ಹಣಕಾಸು ಅಧಿಕಾರಿಗಳು. ಕುವೆಂಪು ವಿಶ್ವವಿದ್ಯಾಲಯ, ಶಂಕರಘಟ್ಟ
19) ಕಛೇರಿ ಪ್ರತಿ.

# ಕುವೆಂಪು ವಿಶ್ವವಿದ್ಯಾಲಯ

ದಿನಾಂಕ:15-06-2022 ರಂದು ಬುಧವಾರ ಅಪರಾಹ್ನ:04.30 ಗಂಟೆಗೆ ವಿಶ್ವವಿದ್ಯಾಲಯದ **"ಶತಮಾನೋತ್ಸವ ಭವನದ ಮೂರನೇ ಮಹಡಿಯ ಸಿಂಡಿಕೇಟ್ ಸಭಾಂಗಣ"**ದಲ್ಲಿ ನಡೆದ ವಿದ್ಯಾವಿಷಯಕ ಪರಿಷತ್ತಿನ ಅಸಾಮಾನ್ಯ ಸಭೆಯ ನಡಾವಳಿಗಳು.

**ಹಾಜರಿದ್ದ ಸದಸ್ಯರು :**

| | | |
|---|---|---|
| 1. | ಪ್ರೊ. ಬಿ.ಪಿ ವೀರಭದ್ರಪ್ಪ, ಕುಲಪತಿಗಳು | ಅಧ್ಯಕ್ಷರು |
| 2. | ಶ್ರೀಮತಿ ಅನುರಾಧ ಜಿ. ಕೆ.ಎ.ಎಸ್.(ಆಯ್ಕೆ ಶ್ರೇಣಿ), ಕುಲಸಚಿವರು | ಸದಸ್ಯ ಕಾರ್ಯದರ್ಶಿ |
| 3. | ಪ್ರೊ. ನವೀನ್ ಕುಮಾರ್ ಎಸ್.ಕೆ. ಕುಲಸಚಿವರು(ಮೌಲ್ಯಮಾಪನ) | ಸದಸ್ಯರು |
| 4. | ಶ್ರೀ ರಾಜಶೇಖರ್ ಹೆಬ್ಬಾರ್ ಕಾಲೇಜು ಶಿಕ್ಷಣ ಇಲಾಖೆ ಆಯುಕ್ತರ ಪ್ರತಿನಿಧಿ | ಸದಸ್ಯರು |
| 5. | ಶ್ರೀ ವಿನಯ ಕುಮಾರ್ ಶೆಟ್ಟಿ ಪ್ರಾಂಶುಪಾಲರು | ಸದಸ್ಯರು |
| 6. | ಡಾ. ಎ.ಟಿ. ಪದ್ಮೇಗೌಡ ಪ್ರಾಂಶುಪಾಲರು | ಸದಸ್ಯರು |
| 7. | ಡಾ. ವಿಷ್ಣುಮೂರ್ತಿ ಕೆ.ಎ. ಪ್ರಾಂಶುಪಾಲರು | ಸದಸ್ಯರು |
| 8. | ಶ್ರೀಮತಿ ಭಾರತಿ ಪ್ರಾಂಶುಪಾಲರು | ಸದಸ್ಯರು |
| 9. | ಶ್ರೀ ನಟೇಶ ಎಸ್.ಎಂ. ಪ್ರಾಂಶುಪಾಲರು | ಸದಸ್ಯರು |
| 10. | ಶ್ರೀ ಬಿ.ಸಿ. ಬಸವರಾಜಪ್ಪ ಪ್ರಾಂಶುಪಾಲರು | ಸದಸ್ಯರು |
| 11. | ಶ್ರೀ ಮಹಾಲಿಂಗಪ್ಪ ಈ. ಪ್ರಾಂಶುಪಾಲರು | ಸದಸ್ಯರು |
| 12. | ಡಾ. ಎಂ. ಸ್ವಾಮಿ ಪ್ರಾಂಶುಪಾಲರು | ಸದಸ್ಯರು |
| 13. | ಶ್ರೀ ಚಂದ್ರಶೇಖರ ಎಸ್. | ಸದಸ್ಯರು |
| 14. | ಶ್ರೀ ಎಂ.ಎ. ರಮೇಶ್ ಹೆಗಡೆ | ಸದಸ್ಯರು |
| 15. | ಶ್ರೀಮತಿ ಗೀತಾಂಜಲಿ | ಸದಸ್ಯರು |
| 16. | ಶ್ರೀ ಕುಮಾರೇಗೌಡ | ಸದಸ್ಯರು |
| 17. | ಡಾ. ರವಿಕಿರಣ ಹೆಚ್.ಕೆ. | ಸದಸ್ಯರು |
| 18. | ಶ್ರೀ ಶಿವಣ್ಣ ಪಿ. | ಸದಸ್ಯರು |
| 19. | ಡಾ. ನರಸಿಂಹಮೂರ್ತಿ ಎಸ್.ಕೆ., ಪ್ರಾಧ್ಯಾಪಕರು | ಸದಸ್ಯರು |
| 20. | ಡಾ. ಎಸ್. ಚಂದ್ರಶೇಖರ್, ಪ್ರಾಧ್ಯಾಪಕರು | ಸದಸ್ಯರು |
| 21. | ಡಾ. ಪದ್ಮಮ್ಮ ಎಸ್. ಪ್ರಾಧ್ಯಾಪಕರು | ಸದಸ್ಯರು |
| 22. | ಡಾ. ಆರ್ತೋಬ ನಾಯಕ ವೈ., ಪ್ರಾಧ್ಯಾಪಕರು | ಸದಸ್ಯರು |
| 23. | ಪ್ರೊ. ರಿಯಾಜ್ ಮಹಮೂದ್ ಡೀನರು., ವಿಜ್ಞಾನ ನಿಕಾಯ | ಸದಸ್ಯರು |
| 24. | ಪ್ರೊ. ವೆಂಕಟೇಶ್ ಎಸ್, ಡೀನರು., ವಾಣಿಜ್ಯ ನಿಕಾಯ | ಸದಸ್ಯರು |
| 25. | ಡಾ. ಗೀತಾ ಸಿ., ಡೀನರು., ಶಿಕ್ಷಣ ನಿಕಾಯ | ಸದಸ್ಯರು |
| 26. | ಡಾ. ಆರ್.ಹೆಚ್. ವಾಲ್ಮೀಕಿ ಗ್ರಂಥಪಾಲಕರು, (ಪ್ರಭಾರ) | ಸದಸ್ಯರು |
| 27. | ಪ್ರೊ. ಹೆಚ್.ಎಸ್. ಜಯಣ್ಣ, ನಿರ್ದೇಶಕರು ಯೋಜನೆ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಮಂಡಳಿ. | ಸದಸ್ಯರು |
| 28. | ಡಾ. ನಾಗರಾಜ. ನಿರ್ದೇಶಕರು, ಕಾಲೇಜು ಅಭಿವೃದ್ಧಿ ಪರಿಷತ್. | ಸದಸ್ಯರು |
| 29. | ಡಾ. ಜಿ. ಪ್ರಶಾಂತ್ ನಾಯಕ., ನಿರ್ದೇಶಕರು. ವಿದ್ಯಾರ್ಥಿ ಕ್ಷೇಮಪಾಲನಾ ಅಧಿಕಾರಿ | ಸದಸ್ಯರು |
| 30. | ಡಾ. ಎನ್.ಡಿ. ವಿರೂಪಾಕ್ಷ (ಪ್ರಭಾರ), ನಿರ್ದೇಶಕರು. ದೈಹಿಕ ಶಿಕ್ಷಣ | ಸದಸ್ಯರು |
| 31. | ಶ್ರೀ ಎಸ್. ರಾಮಕೃಷ್ಣ , ಹಣಕಾಸು ಅಧಿಕಾರಿಗಳು | ಸದಸ್ಯರು |
| 32. | ಪ್ರೊ. ಹೆಚ್.ಎಸ್. ಜಯಣ್ಣ, ನಿರ್ದೇಶಕರು ಐ.ಕ್ಯೂ.ಎ.ಸಿ | ವಿಶೇಷ ಆಹ್ವಾನಿತರು |

**ಗೈರು ಹಾಜರಾದ ಸದಸ್ಯರು :**

| | | |
|---|---|---|
| 1. | ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ. ಬೆಂಗಳೂರು | ಸದಸ್ಯರು |
| 2. | ಶ್ರೀ ಎಸ್. ರುದ್ರೇಗೌಡ, ವಿಧಾನ ಪರಿಷತ್ ಸದಸ್ಯರು. ಶಿವಮೊಗ್ಗ | ಸದಸ್ಯರು |
| 3. | ಶ್ರೀಮತಿ ಸೀಮಾ ಕೌಸರ್, ಹೆಚ್. ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಸೊರಬ | ಸದಸ್ಯರು |
| 4. | ಡಾ. ಕೆ.ಎಂ. ಮಹಾದೇವನ್ ಪ್ರಾಧ್ಯಾಪಕರು | |

5. ಪ್ರೊ. ಯೋಗೀಶ್ ಎಸ್.ಎನ್.. ಡೀನರು., ಕಲಾನಿಕಾಯ
6. ಶ್ರೀಮತಿ ಮಮತಾ ಸಾಲಿ
7. ಶ್ರೀಮತಿ ಎಸ್.ಬಿ. ಅನುಪಮ
8. ಶ್ರೀ ಮನೋಜ್ ಸಲ್ಡಾನಾ
9. ಡಾ. ಬಿರಾದರ್ ಬಿ.ಎಸ್.. ನಿರ್ದೇಶಕರು ದೂರ ಶಿಕ್ಷಣ ನಿರ್ದೇಶನಾಲಯ

ಪ್ರಸ್ತಾವನೆ:

ಪ್ರಾರಂಭದಲ್ಲಿ ಸಭೆಗೆ ಆಗಮಿಸಿದ ಸದಸ್ಯರಿಗೆ ಹಾಗೂ ನೂತನವಾಗಿ ನಾಮನಿರ್ದೇಶನಗೊಂಡ ಸದಸ್ಯರಿಗೆ ಮಾನ್ಯ ಕುಲಸಚಿವರು ವಿದ್ಯಾವಿಷಯಕ ಪರಿಷತ್ ಸಭೆಯ ಪರವಾಗಿ ಆತ್ಮೀಯವಾಗಿ ಸ್ವಾಗತ ಕೋರಿದರು. ನಂತರ ವಿದ್ಯಾವಿಷಯಕ ಪರಿಷತ್ ಹೊಸದಾಗಿ ಸದಸ್ಯರಾಗಿ ಆಯ್ಕೆಗೊಂಡು ಈ ದಿನದ ಸಭೆಗೆ ಆಗಮಿಸಿರುವ ಈ ಕೆಳಕಂಡ ಸದಸ್ಯರುಗಳಿಗೆ ಸ್ವಾಗತ ಕೋರಲಾಯಿತು.

1) **ಶ್ರೀ ರಾಜಶೇಖರ್ ಹೆಬ್ಬಾರ್**
ಜಂಟಿ ನಿರ್ದೇಶಕರು
ಕಾಲೇಜು ಶಿಕ್ಷಣ ಇಲಾಖೆ, ಪ್ರಾದೇಶಿಕ ಕಛೇರಿ,
ಶಿವಮೊಗ್ಗ.

2) **ಪ್ರೊ. ಜಿ. ಪ್ರಶಾಂತ್ ನಾಯಕ**
ಕನ್ನಡ ಭಾರತಿ,
ಕುವೆಂಪು ವಿಶ್ವವಿದ್ಯಾಲಯ,
ಶಂಕರಘಟ್ಟ.

3) **ಡಾ. ಎ.ಟಿ. ಪದ್ಮೇಗೌಡ**
ಪ್ರಾಂಶುಪಾಲರು,
ಡಿ.ವಿ.ಎಸ್. ಸಂಜೆ ಕಾಲೇಜು, ಶಿವಮೊಗ್ಗ.

4) **ಶ್ರೀಮತಿ ಸೀಮಾ ಕೌಸರ್. ಹೆಚ್.**
ಪ್ರಾಂಶುಪಾಲರು,
ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಸೊರಬ.

ನೂತನ ಸದಸ್ಯರುಗಳಿಗೆ ಮಾನ್ಯ ಕುಲಪತಿಗಳು ಅಭಿನಂದನೆ ಸಲ್ಲಿಸಿದ ನಂತರ ಕಾರ್ಯಸೂಚಿಯಲ್ಲಿರುವಂತೆ ವಿಷಯಗಳನ್ನು ಕೈಗೆತ್ತಿಕೊಳ್ಳಲಾಯಿತು.

**2022:ಎಸಿ-2.01:** ವಿಶ್ವವಿದ್ಯಾಲಯದ 31 ಮತ್ತು 32ನೇ ಘಟಿಕೋತ್ಸವದಲ್ಲಿ ವಿವಿಧ ಸ್ನಾತಕ ಮತ್ತು ಸ್ನಾತಕೋತ್ತರ ಹಾಗೂ ಇತರೆ ಪದವಿಗಳಿಗೆ ಅರ್ಹರಾದ ವಿದ್ಯಾರ್ಥಿಗಳ/ ಅಭ್ಯರ್ಥಿಗಳ ಪಟ್ಟಿ ಅನುಮೋದನೆ ಬಗ್ಗೆ.

**ಚರ್ಚೆ:** ಕುವೆಂಪು ವಿಶ್ವವಿದ್ಯಾಲಯದ 31 ಮತ್ತು 32ನೇ ವಾರ್ಷಿಕ ಘಟಿಕೋತ್ಸವ ಸಮಾರಂಭವು ದಿನಾಂಕ:16-06-2022 ರಂದು ಜರುಗಲಿದ್ದು, ಈ ಸಂದರ್ಭದಲ್ಲಿ ವಿವಿಧ ಸ್ನಾತಕ/ ಸ್ನಾತಕೋತ್ತರ/ ಪಿ.ಜಿ.ಡಿಪ್ಲೋಮಾ ಹಾಗೂ ಇತರೆ ಪದವಿಗಳಿಗೆ ಅರ್ಹರಾದ ವಿದ್ಯಾರ್ಥಿಗಳ

ವಿವರಗಳನ್ನೊಳಗೊಂಡ ಪಟ್ಟಿಯ ಕುರಿತು ಕುಲಸಚಿವ ಪರೀಕ್ಷಾಂಗ ಇವರು ಸಭೆಗೆ ವಿವರವಾಗಿ ವಿವರಿಸಿದರು.

**ನಿರ್ಣಯ:** ಸುದೀರ್ಘ ಚರ್ಚೆಯ ನಂತರ ಪದವಿಗೆ ಅರ್ಹರಾದ ವಿದ್ಯಾರ್ಥಿಗಳ ಪಟ್ಟಿಯನ್ನು ಅನುಮೋದಿಸಲಾಯಿತು.

## ಪ್ರಾಧಿಕಾರಗಳ ವಿಭಾಗ

2022:ಎಸಿ–2.02: "DRAFT STATUTES GOVERNING THE UP-GRADATION AND REORGANIZATION OF THE SANCTIONED MINISTERIAL AND GROUP-D POSTS IN THE KUVEMPU UNIVERSITY" ಪರಿನಿಯಮದ ಅನುಮೋದನೆ ಕುರಿತು.

**ಚರ್ಚೆ:** ಸದರಿ ಪರಿನಿಯಮದ ಬಗ್ಗೆ ಸಭೆಗೆ ವಿವರಿಸಿದ ಕುಲಸಚಿವರು ಪರಿನಿಯಮವು ಸಿಂಡಿಕೇಟ್‌ನಲ್ಲಿ ಅನುಮೋದನೆಯಾಗಿದ್ದು, ವಿದ್ಯಾವಿಷಯಕ ಪರಿಷತ್ ಮತ್ತು ಹಣಕಾಸು ಸಮಿತಿ ಸಭೆಯಲ್ಲಿ ಅನುಮೋದನೆಯಾಗಬೇಕಾಗಿರುತ್ತದೆಂದು ತಿಳಿಸಿದರು. ಇದರ ಜೊತೆಗೆ ವಿಶ್ವವಿದ್ಯಾಲಯದ ಸಿಬ್ಬಂದಿಗಳಿಗೆ ಜಂಟಿ ನಿರ್ದೇಶಕರು ಕಾಲೇಜು ಶಿಕ್ಷಣ ಇಲಾಖೆ, ಪ್ರಾಂತೀಯ ಕಛೇರಿ, ಶಿವಮೊಗ್ಗ ಇವರ ಮುಖಾಂತರ ಹೆಚ್.ಆರ್.ಎಂ.ಎಸ್. ಮೂಲಕ ವೇತವನ್ನು ಪಾವತಿಸುತ್ತಿದ್ದು, ಉನ್ನತೀಕರಣ ಹುದ್ದೆ ಮೂಲಕ ಬಡ್ತಿ ಹೊಂದಿದ ನೌಕರರ ವೇತನ ಪಾವತಿ ಮಂಜೂರು ಮಾಡಲು ಸದರಿ ಪರಿನಿಯಮಕ್ಕೆ ಸರ್ಕಾರದ ಅನುಮೋದನೆ ಪಡೆಯುವುದು ಅವಶ್ಯಕವೆಂದು ಜಂಟಿ ನಿರ್ದೇಕರು ತಿಳಿಸಿದ್ದು, ಈ ಹಿನ್ನೆಲೆಯಲ್ಲಿ ಸಿಬ್ಬಂದಿಗಳ ವೇತನಕ್ಕೆ ಅಡಚಣೆಯಾಗದಂತೆ ಈ ಪರಿನಿಯಮವನ್ನು ಆದಷ್ಟು ಬೇಗ ಅನುಮೋದಿಸಿ ಸರ್ಕಾರದ ಅನುಮೋದನೆಗೆ ಕಳುಹಿಸಬೇಕಾಗಿದೆ ಎಂದು ಸಭೆಗೆ ತಿಳಿಸಿದರು. ಈ ಬಗ್ಗೆ ಸುದೀರ್ಘವಾಗಿ ಚರ್ಚಿಸಲಾಯಿತು. ಚರ್ಚೆಯಲ್ಲಿ ಪಾಲ್ಗೊಂಡ ಸದಸ್ಯರಾದ ಪ್ರೊ. ಅರ್ತೋಬ ನಾಯಕ ವೈ. ಇವರು ಮಾತನಾಡಿ ಸದರಿ ಪರಿನಿಯಮವನ್ನು ಮತ್ತೊಮ್ಮೆ ಪುನರ್ ಪರಿಶೀಲಿಸುವ ಅಗತ್ಯವಿದೆ ಎಂದು ಹೇಳಿದರು. ಹಾಗೂ ಪರಿಶೀಲನೆ ನಂತರ ಪರಿನಿಯಮವನ್ನು ಸರ್ಕಾರದ ಅನುಮೋದನೆಗೆ ಕಳುಹಿಸಬಹುದೆಂದು ಸಭೆಗೆ ತಿಳಿಸಿದರು.

**ನಿರ್ಣಯ:** ಸಭೆಯು ಪರಿನಿಯಮವನ್ನು ಅದಷ್ಟು ಬೇಗ ಸರ್ಕಾರದ ಅನುಮೋದನೆಗೆ ಸಲ್ಲಿಸಲು ಹಾಗೂ ಸರ್ಕಾರದಿಂದ ಅನುಮೋದನೆಯಾಗುವ ಷರತ್ತಿಗೊಳಪಟ್ಟು ಹಾಗೂ ಸರ್ಕಾರದ ನಿರ್ದೇಶನವನ್ನು ಕಾಯ್ದಿರಿಸಿ ಉನ್ನತೀಕರಣದ ಮೂಲಕ ಬಡ್ತಿ ಹೊಂದಿದ ನೌಕರರ ವೇತನ ಪಾವತಿಗೆ ಹಾಗೂ ಬಡ್ತಿಗೆ ಷರತ್ತುಗಳೊಂದಿಗೆ ನಿಯಮಾನುಸಾರ ಕ್ರಮಕೈಗೊಳ್ಳಬಹುದೆಂದು ಸಭೆಯು ನಿರ್ಣಯಿಸಿತು.

## ಕಾಲೇಜು ಅಭಿವೃದ್ಧಿ ಪರಿಷತ್

2022:ಎಸಿ–2.03 : ಕಾಲೇಜುಗಳ 2022–23ನೇ ಸಾಲಿನ ಸಂಯೋಜನಾ ವರದಿಗಳನ್ನು ವಿದ್ಯಾವಿಷಯಕ ಪರಿಷತ್ ಸಭೆಯ ಅನುಮೋದನೆಗೆ ಮಂಡಿಸುವ ಕುರಿತು.

**ಚರ್ಚೆ** : 2022–23ನೇ ಸಾಲಿನ ಕಾಲೇಜುಗಳ ಸಂಯೋಜನಾ ವರದಿಗಳನ್ನು ಪರಿಶೀಲಿಸಿದ ಸಭೆಯು ಸರ್ಕಾರದ ನಿರ್ದೇಶನದಂತೆ ಸಿದ್ಧಪಡಿಸಲಾಗಿದ್ದು, ನಿಗದಿತ ಸಮಯದಲ್ಲಿ ವರದಿಗಳನ್ನು

ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸಬೇಕಾಗಿದ್ದು, ಈ ಕಾರ್ಯವನ್ನು ಕಾಲೇಜು ಅಭಿವೃದ್ಧಿ ಪರಿಷತ್ ಬಹಳ ಅಚ್ಚುಕಟ್ಟಾಗಿ ನಿರ್ವಹಿಸಿರುವುದಕ್ಕೆ ಸಭೆ ಮೆಚ್ಚುಗೆ ವ್ಯಕ್ತಪಡಿಸಿತು.

**ನಿರ್ಣಯ** : ಚರ್ಚೆಯ ನಂತರ ಕಾಲೇಜುಗಳ 2022-23ನೇ ಸಾಲಿನ ಸಂಯೋಜನಾ ವರದಿಗಳನ್ನು ಸಭೆಯು ಅನುಮೋದಿಸಿತು.

**2022:ಎಸಿ-2.04 ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು**

**ಚರ್ಚೆ** : ಕುಲಸಚಿವ ಪರೀಕ್ಷಾಂಗ ಇವರು ಮಾತನಾಡಿ ದಿನಾಂಕ:16-06-2022 ರಂದು ಆಯೋಜಿತವಾಗಿರುವ 31 ಮತ್ತು 32ನೇ ವಾರ್ಷಿಕ ಘಟಿಕೋತ್ಸವದ ಕಾರ್ಯಕ್ರಮಗಳ ವಿವರಗಳನ್ನು ಸಭೆಗೆ ವಿವರವಾಗಿ ತಿಳಿಸಿದರು. ಜೊತೆಗೆ ಘಟಿಕೋತ್ಸವದ ನಿಮಿಷವಾರು ಕಾರ್ಯಕ್ರಮಗಳ ಕುರಿತು (Minute to Minute Programme) ಕುರಿತು ಸಭೆಗೆ ತಿಳಿಸಿದರು. ಜೊತೆಗೆ ಘಟಿಕೋತ್ಸವದ ಯಶಸ್ವಿಗೆ ಎಲ್ಲಾ ಸದಸ್ಯರ ಸಹಕಾರ ಕೋರಿದರು.

**ನಿರ್ಣಯ** : ಘಟಿಕೋತ್ಸವ ಕುರಿತಾದ ಕಾರ್ಯಕ್ರಮಗಳ ಪಟ್ಟಿಯನ್ನು ಸಭೆಯು ಅನುಮೋದಿಸಿತು.

ಅಂತಿಮವಾಗಿ ಸಭೆಗೆ ಆಗಮಿಸಿ ಸೂಕ್ತ ಸಲಹೆ, ಸಹಕಾರ ನೀಡಿದ ಎಲ್ಲಾ ಸದಸ್ಯರುಗಳಿಗೆ, ಮಾನ್ಯ ಕುಲಸಚಿವರು ಹೃತ್ಪೂರ್ವಕವಾಗಿ ವಂದಿಸಿದರು.

ಕುಲಸಚಿವರು

ಸಹಿ/-
ಕುಲಪತಿಗಳು